ಪ್ರಜಾವಾಣಿ

# 'ಧಾರ್ಮಿಕ ಅಲ್ಪಸಂಖ್ಯಾತರಿಗಾಗಿ ಪ್ರತ್ಯೇಕ ಚುನಾವಣೆ'




ಸಾಮಾಜಿಕ ಪ್ರತ್ಯೇಕತೆ ಮತ್ತು ಒಳಗೊಳ್ಳುವಿಕೆ ನೀತಿಯ ಅಧ್ಯಯನ ಕೇಂದ್ರವು ನಗರದಲ್ಲಿ ಭಾನುವಾರ ಆಯೋಜಿಸಿದ್ದ 'ಕರ್ನಾಟಕದಲ್ಲಿ ಧಾರ್ಮಿಕ ಅಲ್ಪಸಂಖ್ಯಾತರ ರಾಜಕೀಯ ಸವಾಲುಗಳು' ವಿಷಯ ಕುರಿತ ವಿಚಾರ ಸಂಕಿರಣದಲ್ಲಿ ದೆಹಲಿಯ ಜವಾಹರ್‌ಲಾಲ್ ನೆಹರು ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರಜ್ಞ ಪ್ರೊ.ವಲೇರಿಯನ್ ರೋಡ್ರಿಗಸ್ (ಎಡದಿಂದ ಮೊದಲನೆಯವರು) ಅವರನ್ನು ಸಾಮಾಜಿಕ ಪ್ರತ್ಯೇಕತೆ ಮತ್ತು ಒಳಗೊಳ್ಳುವಿಕೆ ನೀತಿಯ ಅಧ್ಯಯನ ಕೇಂದ್ರದ ನಿರ್ದೇಶಕ ಪ್ರೊ.ಎಸ್.ಜಾಫೆಟ್ (ಬಲದಿಂದ ಎರಡನೆಯವರು) ಅವರು ಹಸ್ತಲಾಘವ ನೀಡಿ ಅಭಿನಂದಿಸಿದರು. ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿಯ ಸಂದರ್ಶಕ ಪ್ರಾಧ್ಯಾಪಕ ಪ್ರೊ.ಅಬ್ದುಲ್ ಅಜೀಜ್ ಮತ್ತು ಜೈನ್ ವಿಶ್ವವಿದ್ಯಾಲಯದ ಸಮಾಜಶಾಸ್ತ್ರ ಮತ್ತು ಶಿಕ್ಷಣ ಸಂಶೋಧನಾ ಕೇಂದ್ರದ ನಿರ್ದೇಶಕ ಪ್ರೊ.ಸಂದೀಪ್ ಶಾಸ್ತ್ರಿ ಚಿತ್ರದಲ್ಲಿದ್ದಾರೆ -ಪ್ರಜಾವಾಣಿ ಚಿತ್ರ

**ಪ್ರಜಾವಾಣಿ ವಾರ್ತೆ**

ಬೆಂಗಳೂರು: 'ಧಾರ್ಮಿಕ ಅಲ್ಪಸಂಖ್ಯಾತರ ರಾಜಕೀಯ ಪ್ರಾತಿನಿಧ್ಯಕ್ಕಾಗಿ ಪ್ರತ್ಯೇಕ ಚುನಾವಣಾ ವ್ಯವಸ್ಥೆಯ ಅಗತ್ಯವಿದೆ' ಎಂದು ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿಯ ಸಂದರ್ಶಕ ಪ್ರಾಧ್ಯಾಪಕ ಪ್ರೊ.ಅಬ್ದುಲ್ ಅಜೀಜ್ ಹೇಳಿದರು.

ಸಾಮಾಜಿಕ ಪ್ರತ್ಯೇಕತೆ ಮತ್ತು ಒಳಗೊಳ್ಳುವಿಕೆ ನೀತಿಯ ಅಧ್ಯಯನ ಕೇಂದ್ರವು ನಗರದಲ್ಲಿ ಭಾನುವಾರ ಆಯೋಜಿಸಿದ್ದ 'ಕರ್ನಾಟಕದಲ್ಲಿ ಧಾರ್ಮಿಕ ಅಲ್ಪಸಂಖ್ಯಾತರ ರಾಜಕೀಯ ಸವಾಲುಗಳು' ವಿಷಯ ಕುರಿತ ವಿಚಾರ ಸಂಕಿರಣದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

'ರಾಜ್ಯ ರಾಜಕಾರಣದಲ್ಲಿ ಅಲ್ಪಸಂಖ್ಯಾತರ ಪ್ರಾತಿನಿಧ್ಯ ಕಡಿಮೆ ಇದೆ. ರಾಜ್ಯದಲ್ಲಿರುವ ಅಲ್ಪಸಂಖ್ಯಾತರ ಸಂಖ್ಯೆಗೆ ಅನುಗುಣವಾಗಿ ಅಲ್ಪಸಂಖ್ಯಾತ ಜನಪ್ರತಿನಿಧಿಗಳಿಲ್ಲ. ಸ್ಥಳೀಯ ಸಂಸ್ಥೆಗಳು ಹಾಗೂ ವಿಧಾನಸಭೆಯಲ್ಲೂ ಅಲ್ಪಸಂಖ್ಯಾತ ಜನಪ್ರತಿನಿಧಿಗಳ ಸಂಖ್ಯೆ ಕಡಿಮೆ ಇದೆ' ಎಂದು ಅವರು ಹೇಳಿದರು.

'ಅಲ್ಪಸಂಖ್ಯಾತರು, ಅದರಲ್ಲೂ ಮುಸ್ಲಿಂ ಮಹಿಳೆಯರು ಮತದಾನದಲ್ಲಿ ಸಮರ್ಪಕವಾಗಿ ಪಾಲ್ಗೊಳ್ಳುವುದಿಲ್ಲ. ಅಸಮರ್ಪಕ ಮತದಾನದಿಂದ ಅಲ್ಪಸಂಖ್ಯಾತ ಸಮುದಾಯಕ್ಕೆ ಸರಿಯಾದ ರಾಜಕೀಯ ಪ್ರಾತಿನಿಧ್ಯ ದೊರೆಯುತ್ತಿಲ್ಲ. ಚುನಾವಣಾ ವ್ಯವಸ್ಥೆ, ಮತದಾನ ಹಾಗೂ ರಾಜಕೀಯ ಪ್ರಾತಿನಿಧ್ಯದ ಬಗ್ಗೆ ಅಲ್ಪಸಂಖ್ಯಾತರಲ್ಲಿ ಅರಿವು ಮೂಡಿಸಬೇಕಾದ ಅಗತ್ಯವಿದೆ' ಎಂದು ಅವರು ತಿಳಿಸಿದರು.

'ಅಲ್ಪಸಂಖ್ಯಾತರ ಮತದಾನ ಪ್ರಮಾಣ ವರ್ಷದಿಂದ ವರ್ಷಕ್ಕೆ ಇಳಿಮುಖವಾಗುತ್ತಿದೆ. ರಾಜಕೀಯದ ಮಹತ್ವ ಅಲ್ಪಸಂಖ್ಯಾತ ಸಮುದಾಯದ ಜನರಿಗೆ ಇನ್ನೂ ತಿಳಿದಿಲ್ಲ. ಎಲ್ಲ ಅಲ್ಪಸಂಖ್ಯಾತರೂ ಸಮರ್ಪಕ ಮತದಾನಕ್ಕೆ ಮುಂದಾಗಬೇಕು' ಎಂದರು.

'ಜಾನುವಾರು ಹತ್ಯೆ ನಿಷೇಧ ಕಾಯ್ದೆಯನ್ನು ವಿರೋಧಿಸಲು ಅಲ್ಪಸಂಖ್ಯಾತರಿಂದ ಸಾಧ್ಯವಾಗುತ್ತಿಲ್ಲ. ಗಲಭೆಗಳು ನಡೆದ ಸಂದರ್ಭದಲ್ಲಿ ಉಗ್ರವಾದಿಗಳೆಂಬ ಹಣೆಪಟ್ಟಿ ಹಚ್ಚಿ ಅಲ್ಪಸಂಖ್ಯಾತರನ್ನು ಬಂಧಿಸಲಾಗುತ್ತಿದೆ. ಇದನ್ನು ವಿರೋಧಿಸಲೂ ಅಲ್ಪಸಂಖ್ಯಾತರು ಅಸಹಾಯಕರಾಗಿದ್ದಾರೆ' ಎಂದು ವಿಷಾದಿಸಿದರು.

'ಅಂಬೇಡ್ಕರ್ ಅವರು ದಲಿತರಿಗೆ ಪ್ರತ್ಯೇಕ ಮತದಾನ ವ್ಯವಸ್ಥೆ ಕಲ್ಪಿಸಲು ಆಗ್ರಹಿಸಿದಂತೆ, ಅಲ್ಪಸಂಖ್ಯಾತರಿಗೂ ಪ್ರತ್ಯೇಕ ಮತದಾನ ವ್ಯವಸ್ಥೆಯನ್ನು ಜಾರಿಗೆ ತರಬೇಕು. ದೇಶದ ದೊಡ್ಡ ದೊಡ್ಡ ರಾಜಕೀಯ ಪಕ್ಷಗಳು ಅಲ್ಪಸಂಖ್ಯಾತರನ್ನು ವಂಚಿಸುತ್ತಿರುವ ಕಾರಣ ದಲಿತರು, ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗಗಳು ಪರ್ಯಾಯ ರಾಜಕೀಯ ಪಕ್ಷ ಸ್ಥಾಪಿಸುವ ಅನಿವಾರ್ಯತೆ ಇದೆ' ಎಂದರು.

'ಪ್ರಜಾವಾಣಿ'ಯ ಸಹಾಯಕ ಸಂಪಾದಕ ದಿನೇಶ್ ಅಮಿನ್‌ಮಟ್ಟು ಮಾತನಾಡಿ, 'ರಾಜ್ಯದ ರಾಜಕೀಯದಲ್ಲಿ ಅಲ್ಪಸಂಖ್ಯಾತರ ಪ್ರಾತಿನಿಧ್ಯ ಕಡಿಮೆಯಾಗುತ್ತಿರುವುದರಿಂದ ಅಲ್ಪಸಂಖ್ಯಾತರಿಗೆ ರಾಜಕೀಯ ಮೀಸಲಾತಿ ನೀಡಬೇಕಾದ ಅಗತ್ಯವಿದೆ. ರಾಜಕೀಯ ಪ್ರಾತಿನಿಧ್ಯ ಪಡೆದ ಅಲ್ಪಸಂಖ್ಯಾತ ಜನಪ್ರತಿನಿಧಿಗಳು ತಮ್ಮ ಸಮುದಾಯದ ಏಳಿಗೆಗೆ ಶ್ರಮಿಸಬೇಕು' ಎಂದರು.

ಜೈನ್ ವಿಶ್ವವಿದ್ಯಾಲಯದ ಸಮಾಜ ಶಾಸ್ತ್ರ ಮತ್ತು ಶಿಕ್ಷಣ ಸಂಶೋಧನಾ ಕೇಂದ್ರದ ನಿರ್ದೇಶಕ ಪ್ರೊ.ಸಂದೀಪ್ ಶಾಸ್ತ್ರಿ, ಪತ್ರಕರ್ತ ರವೀಂದ್ರ ರೇಷ್ಮೆ, ಸಾಮಾಜಿಕ ಪ್ರತ್ಯೇಕತೆ ಮತ್ತು ಒಳಗೊಳ್ಳುವಿಕೆ ನೀತಿಯ ಅಧ್ಯಯನ ಕೇಂದ್ರದ ನಿರ್ದೇಶಕ ಪ್ರೊ.ಎಸ್ .ಜಾಫೆಟ್ ಮತ್ತಿತರರು ಉಪಸ್ಥಿತರಿದ್ದರು.